**All India Radio: Bangalore**
**National Bulletin In Kannada**
**10.04.2025 19.35 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಮುಂಬೈ ಭಯೋತ್ಪಾದಕ ದಾಳಿಯ ಆರೋಪಿ ತಹವ್ವೂರ್ ರಾಣಾನನ್ನು ದೆಹಲಿಗೆ ಕರೆತಂದ ಎನ್‌ಐಎ ಅಧಿಕಾರಿಗಳು

೨. ಸ್ಲೋವಾಕಿಯಾ-ಭಾರತ ವ್ಯಾಪಾರ ವೇದಿಕೆ ಉದ್ಘಾಟಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು

೩. ಉತ್ತರ ಪ್ರದೇಶ, ಮಧ್ಯಪ್ರದೇಶಕ್ಕೆ ನಾಳೆ ಪ್ರಧಾನಿ ನರೇಂದ್ರ ಮೋದಿ ಭೇಟಿ

೪. ಪ್ರಧಾನಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್ ಯೋಜನೆ; ಸಾಮಗ್ರಿಗಳ ವೆಚ್ಚ ಶೇಕಡ ೯.೫ ರಷ್ಟು ಹೆಚ್ಚಳ

೫. ಐಪಿಎಲ್ ಟಿ-೨೦ ಕ್ರಿಕೆಟ್; ರಾಯಲ್ ಚಾಲೆಂಜರ್ಸ್ ಬೆಂಗಳೂರು ವಿರುದ್ಧ ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ಫೀಲ್ಡಿಂಗ್ ಆಯ್ಕೆ

****************

೨೦೦೮ರ ನವೆಂಬರ್ ೨೬ರಂದು ಮುಂಬೈ ಭಯೋತ್ಪಾದಕ ದಾಳಿಯ ಆರೋಪಿ ತಹವ್ವೂರ್ ರಾಣಾನನ್ನು ಇಂದು ದೆಹಲಿಗೆ ಕರೆತರಲಾಯಿತು. ಈ ಹಿನ್ನೆಲೆಯಲ್ಲಿ ದೆಹಲಿಯ ಎನ್‌ಐಎ ಪ್ರಧಾನ ಕಚೇರಿ, ಪಟಿಯಾಲ ನ್ಯಾಯಾಲಯ ಮತ್ತು ರಾಷ್ಟ್ರ ರಾಜಧಾನಿಯ ಇತರೆ ಕೆಲವು ಪ್ರದೇಶಗಳಲ್ಲಿ ಭದ್ರತೆಯನ್ನು ಹೆಚ್ಚಿಸಲಾಗಿದೆ. ಪ್ರಧಾನಿ ನರೇಂದ್ರ ಮೋದಿಯವರ ದೃಢಸಂಕಲ್ಪದಿಂದಾಗಿ, ಮುಂಬೈ ದಾಳಿಯ ಆರೋಪಿಯನ್ನು ಇಂದು ಭಾರತಕ್ಕೆ ಕರೆತರಲಾಗಿದೆ. ಆರೋಪಿಗೆ ಕಠಿಣ ಶಿಕ್ಷೆ ವಿಧಿಸಲಾಗುವುದು ಎಂದು ಕೇಂದ್ರ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ.

ಮುಂಬೈನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭಯೋತ್ಪಾದಕರನ್ನು ಶಿಕ್ಷಿಸಲು ಕಾಂಗ್ರೆಸ್ ಸರ್ಕಾರ ಏನೂ ಮಾಡಿಲ್ಲ ಎಂದು ಆರೋಪಿಸಿದರು. ಗಡೀಪಾರು ಭೀತಿಯಿಂದ ತಪ್ಪಿಸಿಕೊಳ್ಳುವ ಅಂತಿಮ ಪ್ರಯತ್ನ ವಿಫಲವಾದ ನಂತರ, ಅಮೆರಿಕ ಸುಪ್ರೀಂ ಕೋರ್ಟ್, ತಹವ್ವೂರ್ ರಾಣಾ ಅರ್ಜಿಯನ್ನು ತಿರಸ್ಕರಿಸಿದ್ದರಿಂದ ಆತನನ್ನು ಭಾರತಕ್ಕೆ ಕರೆತರಲಾಗಿದೆ.

೨೦೦೮ ರ ಮುಂಬೈ ಭಯೋತ್ಪಾದಕ ದಾಳಿಯ ಪ್ರಮುಖ ಆರೋಪಿ ತಹವ್ವೂರ್ ರಾಣಾನನ್ನು ಭಾರತಕ್ಕೆ ವಾಪಸ್ ಕರೆ ತರುತ್ತಿರುವುದು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ದೊಡ್ಡ ರಾಜತಾಂತ್ರಿಕ ಯಶಸ್ಸು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಖಾಸಗಿ ವಾಹಿನಿಗೆ ನೀಡಿದ ಸಂದರ್ಶನದಲ್ಲಿ ಅವರು, ಭಾರತದ ಜನರದೊಂದಿಗೆ ಅನುಚಿತವಾಗಿ ವರ್ತಿಸಿದ ಎಲ್ಲ ಆರೋಪಿಗಳನ್ನು ದೇಶಕ್ಕೆ ವಾಪಸ್ ಕರೆ ತಂದು, ಅವರನ್ನು ವಿಚಾರಣೆಗೆ ಗುರಿಪಡಿಸುವುದು ಭಾರತ ಸರ್ಕಾರದ ಜವಾಬ್ದಾರಿಯಾಗಿದೆ ಎಂದು ಹೇಳಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದಿಂದ ದೇಶದಲ್ಲಿ ರಾಷ್ಟ್ರ ವಿರೋಧಿ ಅಂಶಗಳ ಮೇಲೆ ಕಟ್ಟುನಿಟ್ಟಿನ ಕಣ್ಗಾವಲು ಇಡಲಾಗಿದೆ ಎಂದು ಕೇಂದ್ರ ಗೃಹ ವ್ಯವಹಾರಗಳ ರಾಜ್ಯ ಸಚಿವ ನಿತ್ಯಾನಂದ ರೈ ಹೇಳಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದಿಂದ ಭಯೋತ್ಪಾದನೆಯನ್ನು ಬಹುತೇಕ ನಿರ್ಮೂಲನೆ ಮಾಡಲಾಗಿದೆ. ಕಳೆದ ೧೧ ವರ್ಷಗಳಿಂದ ಭಾರತದಲ್ಲಿ ಅಸ್ಥಿರತೆಯನ್ನು ಸೃಷ್ಟಿಸಲು ಪ್ರಯತ್ನಿಸಿದವರ ವಿರುದ್ಧ ಬಲವಾದ ಕ್ರಮ ಕೈಗೊಳ್ಳಲಾಗಿದೆ ಎಂದರು. ೨೦೦೮ರ ನವೆಂಬರ್ ೨೬ರಂದು ಮುಂಬೈ ಮೇಲೆ ನಡೆದ ಭಯೋತ್ಪಾದಕ ದಾಳಿ ಪ್ರಕರಣದಲ್ಲಿ ಆರೋಪಿ ತಹವ್ವೂರ್ ರಾಣಾ ಸೇರಿದಂತೆ ಮತ್ತಿತರರ ವಿರುದ್ಧ ವಿಚಾರಣಾ ನ್ಯಾಯಾಲಯದಲ್ಲಿ ವಾದ ಮಂಡಿಸಲು ನ್ಯಾಯವಾದಿ ನರೇಂದರ್ ಮಾನ್

ಅವರನ್ನು ವಿಶೇಷ ಸಾರ್ವಜನಿಕ ಅಭಿಯೋಜಕರಾಗಿ ನೇಮಕ ಮಾಡಿ, ಕೇಂದ್ರ ಸರ್ಕಾರ ಆದೇಶ ಹೊರಡಿಸಿದೆ.

ಈ ಕುರಿತು ಕೇಂದ್ರ ಗೃಹ ಸಚಿವಾಲಯ, ದೆಹಲಿ ಮತ್ತು ಇತರೆ ನ್ಯಾಯಾಲಯಗಳಲ್ಲಿ ಮೂರು ವರ್ಷಗಳ ಅವಧಿಗೆ ರಾಷ್ಟ್ರೀಯ ತನಿಖಾ ದಳದ ಪರವಾಗಿ ವಿಶೇಷ ನ್ಯಾಯಾಲಯಗಳಲ್ಲಿ ನ್ಯಾಯವಾದಿ ನರೇಂದರ್ ಮಾನ್ ಅವರು, ವಾದ ಮಂಡಿಸಲಿದ್ದಾರೆ ಎಂದು ಹೇಳಿದೆ.

****************

ಸ್ಲೋವಾಕಿಯಾ ಭೇಟಿಯಲ್ಲಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ಇಂದು ರಾಮಾಯಣ ಬೊಂಬೆ ಪ್ರದರ್ಶನವನ್ನು ವೀಕ್ಷಿಸಿದರು. ಭಾರತೀಯ ಸಂಸ್ಕೃತಿಯನ್ನು ಸ್ಲೋವಾಕ್ ಜನರಿಗೆ ಪರಿಚಯಿಸುವುದು ಮತ್ತು ರಾಮಾಯಣದ ಮೌಲ್ಯಗಳನ್ನು ಎತ್ತಿ ಹಿಡಿಯುವುದು ಈ ಬೊಂಬೆ ಪ್ರದರ್ಶನದ ಉದ್ದೇಶವಾಗಿದೆ.
೩೦ ವರ್ಷಗಳಿಂದ ಬೊಂಬೆಯಾಟದ ಮೂಲಕ ಮಕ್ಕಳಿಗೆ ಶಿಕ್ಷಣ ನೀಡುತ್ತಿರುವ ಲೆಂಕಾ ಮುಕೋವಾ, ಈ ಬೊಂಬೆ ಪ್ರದರ್ಶನದ ಹಿಂದಿರುವ ರೂವಾರಿಯಾಗಿದ್ದಾರೆ.

'ಕಾಲ್ಪನಿಕ ಕಥೆಗಳಲ್ಲಿ ಅಡಗಿರುವ ಸೌಂದರ್ಯ; ಸ್ಲೋವಾಕ್ ಮಕ್ಕಳ ದೃಷ್ಟಿಯಲ್ಲಿ ಭಾರತ' ಎಂಬ ಚಿತ್ರಕಲಾ ಪ್ರದರ್ಶನಕ್ಕೂ ಇದೇ ವೇಳೆ ರಾಷ್ಟ್ರಪತಿಗಳು ಭೇಟಿ ನೀಡಿದರು. ಈ ಉಪಕ್ರಮವು ಭಾರತ ಮತ್ತು ಸ್ಲೋವಾಕಿಯಾ ನಡುವೆ ಪರಸ್ಪರ ಸಾಂಸ್ಕೃತಿಕ ತಿಳುವಳಿಕೆ ಬೆಳೆಸುವುದರ ಜೊತೆಗೆ ಬಾಂಧವ್ಯವನ್ನು ಬಲಪಡಿಸುತ್ತದೆ.

ಇದೇ ವೇಳೆ, ಬ್ರಾಟಿಸ್ಲಾವಾದ ವಿದೇಶಾಂಗ ವ್ಯವಹಾರಗಳ ಸಚಿವಾಲಯದಲ್ಲಿ ಸ್ಲೋವಾಕಿಯಾ-ಭಾರತ ವ್ಯಾಪಾರ ವೇದಿಕೆಯನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟಿಸಿದರು. ಈ ವೇಳೆ ಸ್ಲೋವಾಕಿಯಾ ಅಧ್ಯಕ್ಷ ಪೀಟರ್ ಪೆಲ್ಲಿಗ್ರಿನಿ ಮತ್ತು ಸ್ಲೋವೊಕಿಯಾ ವಿದೇಶಾಂಗ ಸಚಿವ ಜುರಾಜ್ ಬ್ಲೇನರ್ ಉಪಸ್ಥಿತರಿದ್ದರು. ನಂತರ ರಾಷ್ಟ್ರಪತಿ ದ್ರೌಪದಿ ಮುರ್ಮು ಮಾತನಾಡಿ, ಈ ವ್ಯಾಪಾರ ವೇದಿಕೆಯು ಪರಸ್ಪರ ಸಹಕಾರ ಮತ್ತು ವ್ಯಾಪಾರ ಅವಕಾಶಗಳನ್ನು ಪರಸ್ಪರ ಪಾಲುದಾರಿಕೆಯಾಗಿ ಪರಿವರ್ತಿಸಲು ಅತ್ಯುತ್ತಮ ಅವಕಾಶವನ್ನು ಒದಗಿಸುತ್ತದೆ ಎಂದು ಹೇಳಿದರು. ಭಾರತವು ವೇಗವಾಗಿ ಬೆಳೆಯುತ್ತಿರುವ ಆರ್ಥಿಕತೆಯಾಗಿದೆ. ಮುಂಬರುವ ವರ್ಷಗಳಲ್ಲಿ ಭಾರತವು ಮೂರನೇ ಅತಿದೊಡ್ಡ ಆರ್ಥಿಕತೆಯಾಗಲಿದೆ ಮತ್ತು ೫ ಟ್ರಿಲಿಯನ್ ಡಾಲರ್ ಆರ್ಥಿಕತೆಯಾಗುವ ಹಾದಿಯಲ್ಲಿದೆ. ಬಲವಾದ ಕೈಗಾರಿಕಾ ವಲಯ ಮತ್ತು ಕಾರ್ಯತಂತ್ರದ ಸ್ಥಳವನ್ನು ಹೊಂದಿರುವ ಸ್ಲೋವಾಕಿಯಾ, ಭಾರತಕ್ಕೆ ಹೊಸ ಅವಕಾಶಗಳನ್ನು ನಿರ್ಮಿಸಲು ಅವಕಾಶ ನೀಡುತ್ತದೆ ಎಂದರು.

****************

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ನಾಳೆ ಉತ್ತರ ಪ್ರದೇಶ ಮತ್ತು ಮಧ್ಯಪ್ರದೇಶಕ್ಕೆ ಭೇಟಿ ನೀಡಲಿದ್ದಾರೆ. ವಾರಾಣಸಿಯಲ್ಲಿ ಅವರು, ಮೂರು ಸಾವಿರದ ೮೮೦ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ವಿವಿಧ ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ೭೦ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಮೊದಲ ಬಾರಿಗೆ ಪ್ರಯೋಜನ ನೀಡುವ ಆಯುಷ್ಮಾನ್ ವಯೋ ವಂದನಾ ಕಾರ್ಡ್‌ಗಳನ್ನು ಪ್ರಧಾನಿ ಹಸ್ತಾಂತರಿಸಲಿದ್ದಾರೆ. ಮೂಲಸೌಕರ್ಯ ಅಭಿವೃದ್ಧಿಗೆ, ವಿಶೇಷವಾಗಿ ವಾರಾಣಸಿಯಲ್ಲಿ ರಸ್ತೆ ಸಂಪರ್ಕ ಹೆಚ್ಚಿಸುವ ತಮ್ಮ ಬದ್ಧತೆಗೆ ಅನುಗುಣವಾಗಿ ಅವರು ವಿವಿಧ ರಸ್ತೆ ಯೋಜನೆಗಳ ಉದ್ಘಾಟನೆ ಮತ್ತು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

ವಿದ್ಯುತ್ ಮೂಲಸೌಕರ್ಯಕ್ಕೆ ಉತ್ತೇಜನ ನೀಡುವ ಮೂಲಕ, ಪ್ರಧಾನಿ ಅವರು, ವಾರಾಣಸಿವಿಭಾಗದ ಜೌನ್‌ಪುರ, ಚಂದೌಲಿ ಮತ್ತು ಘಾಜಿಪುರ ಜಿಲ್ಲೆಗಳ ಒಂದು ಸಾವಿರದ ೪೫ ಕೋಟಿ ರೂಪಾಯಿಗಳಿಗೂ ಅಧಿಕ ಮೌಲ್ಯದ ಪ್ರಸರಣ ಉಪಕೇಂದ್ರಗಳು ಮತ್ತು ಸಂಬಂಧಿತ ಪ್ರಸರಣ ಮಾರ್ಗಗಳನ್ನು ಉದ್ಘಾಟಿಸಲಿದ್ದಾರೆ.

ಮಧ್ಯಪ್ರದೇಶದಲ್ಲಿ ಪ್ರಧಾನಿ ನರೇಂದ್ರ ಮೋದಿ, ಆನಂದಪುರ ಧಾಮದಲ್ಲಿ ಸಾರ್ವಜನಿಕ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ನಂತರ ಅವರು ಇಸಾಘರ್‌ನ ಗುರುಜಿ ಮಹಾರಾಜ್ ದೇವಾಲಯದಲ್ಲಿ ಪೂಜೆ ಸಲ್ಲಿಸಿ, ದರ್ಶನ ಪಡೆಯಲಿದ್ದಾರೆ.

****************

ಪ್ರಧಾನಮಂತ್ರಿ ಪೋಷಣ್ ಶಕ್ತಿ ನಿರ್ಮಾಣ್ ಯೋಜನೆಯಡಿ ಕೇಂದ್ರ ಸರ್ಕಾರವು ಸಾಮಗ್ರಿಗಳ ವೆಚ್ಚವನ್ನು ಶೇಕಡ ೯.೫೦ ರಷ್ಟು ಹೆಚ್ಚಿಸಿದೆ. ಈ ಯೋಜನೆಯು ಕೇಂದ್ರ ಪ್ರಾಯೋಜಿತ ಯೋಜನೆಯಾಗಿದ್ದು, ಇದರ ಅಡಿಯಲ್ಲಿ ಅಂಗನವಾಡಿ ಹಾಗೂ ಸರ್ಕಾರಿ ಮತ್ತು ಸರ್ಕಾರಿ ಅನುದಾನಿತ ಶಾಲೆಗಳಲ್ಲಿ ೧ ರಿಂದ ೮ನೇ ತರಗತಿಯ ಹನ್ನೊಂದು ಕೋಟಿಗೂ ಹೆಚ್ಚು ವಿದ್ಯಾರ್ಥಿಗಳಿಗೆ ಬಿಸಿ ಊಟವನ್ನು ನೀಡಲಾಗುತ್ತದೆ. ಮುಂದಿನ ತಿಂಗಳ ೧ ರಿಂದ ಜಾರಿಗೆ ಬರುವಂತೆ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಹೊಸ ದರಗಳು ಅನ್ವಯವಾಗುತ್ತವೆ ಎಂದು ಕೇಂದ್ರ ಶಿಕ್ಷಣ ಸಚಿವಾಲಯ ತಿಳಿಸಿದೆ. ಈ ಹೆಚ್ಚಳದಿಂದಾಗಿ ೨೦೨೫-೨೬ರಲ್ಲಿ ಕೇಂದ್ರ ಸರ್ಕಾರವು ೯೫೪ ಕೋಟಿ ರೂಪಾಯಿಗಳ ಹೆಚ್ಚುವರಿ ವೆಚ್ಚವನ್ನು ಭರಿಸಲಿದೆ. ಸಾಮಗ್ರಿಗಳ ವೆಚ್ಚದ ಜೊತೆಗೆ, ಕೇಂದ್ರ ಸರ್ಕಾರವು ಭಾರತೀಯ ಆಹಾರ ನಿಗಮದ ಮೂಲಕ ಸುಮಾರು ೨೬ ಲಕ್ಷ ಮೆಟ್ರಿಕ್ ಟನ್ ಆಹಾರ ಧಾನ್ಯಗಳನ್ನು ಒದಗಿಸುತ್ತದೆ. ವಾರ್ಷಿಕ ಸುಮಾರು ಒಂಬತ್ತು ಸಾವಿರ ಕೋಟಿ ರೂಪಾಯಿಗಳ ಸಬ್ಸಿಡಿ ಮತ್ತು ಎಫ್‌ಸಿಐ ಡಿಪೋದಿಂದ ಶಾಲೆಗಳಿಗೆ ಆಹಾರ ಧಾನ್ಯಗಳ ೧೦೦ ಪ್ರತಿಶತ ಸಾಗಣೆ ವೆಚ್ಚ ಸೇರಿದಂತೆ ಆಹಾರ ಧಾನ್ಯಗಳ ೧೦೦ ಪ್ರತಿಶತ ವೆಚ್ಚವನ್ನು ಸರ್ಕಾರ ಭರಿಸಲಿದೆ.

****************

ಜಾಗತಿಕ ಮಾರುಕಟ್ಟೆಗಳಲ್ಲಿನ ಆರ್ಥಿಕ ಅನಿಶ್ಚಿತತೆಯ ಹೊರತಾಗಿಯೂ, ೨೦೨೪-೨೫ರ ಆರ್ಥಿಕ ವರ್ಷದಲ್ಲಿ ಭಾರತದ ಸರಕು ಮತ್ತು ಸೇವೆಗಳ ರಫ್ತು ದಾಖಲೆಯು ೮೨೦ ಶತಕೋಟಿ ಅಮೆರಿಕನ್ ಡಾಲರ್‌ಗಳನ್ನು ದಾಟಿದೆ. ಇದು ಹಿಂದಿನ ಹಣಕಾಸು ವರ್ಷದ ೭೭೮ ಶತಕೋಟಿ ಡಾಲರ್‌ಗಳಿಗಿಂತ ಸುಮಾರು ೬ ಪ್ರತಿಶತ ಹೆಚ್ಚಳವಾಗಿದೆ ಎಂದು ಕೇಂದ್ರ ವಾಣಿಜ್ಯ ಸಚಿವಾಲಯ ತಿಳಿಸಿದೆ.

ರಫ್ತು ಉತ್ತೇಜನ ಮಂಡಳಿ ಮತ್ತು ಕೈಗಾರಿಕಾ ಸಂಸ್ಥೆಗಳೊಂದಿಗೆ ನವದೆಹಲಿಯಲ್ಲಿ ನಡೆದ ಸಭೆಯಲ್ಲಿ ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್, ಈ ಅಂಕಿಅಂಶಗಳನ್ನು ಬಹಿರಂಗಪಡಿಸಿದರು.

****************

ಬೆಂಗಳೂರಿನ ಎಂ.ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಕ್ರಿಕೆಟ್ ಪಂದ್ಯದಲ್ಲಿ ಇಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಿವೆ.

ಟಾಸ್ ಗೆದ್ದ ಡೆಲ್ಲಿ ಕ್ಯಾಪಿಟಲ್ಸ್ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

********ಮುಕ್ತಾಯ*******